# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 851 |
| ಸದಸ್ಯರ ಹೆಸರು | : | ಡಾ|| ಡಿ. ತಿಮ್ಮಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 15.12.2025 |
| ಉತ್ತರಿಸುವವರು | : | ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ವನ್ಯಜೀವಿ ಧಾಮಗಳ ಸಂಖ್ಯೆ ಎಷ್ಟು; ರಾಷ್ಟ್ರೀಯ ಉದ್ಯಾನಗಳ ಸಂಖ್ಯೆ ಎಷ್ಟು; | ರಾಜ್ಯದಲ್ಲಿರುವ ಒಟ್ಟು ವನ್ಯಜೀವಿಧಾಮ ಮತ್ತು ರಾಷ್ಟ್ರೀಯ ಉದ್ಯಾನವನದ ಸಂಖ್ಯೆಯ ವಿವರ ಈ ಕೆಳಕಂಡಂತಿದೆ. |

| ಕ್ರ ಸಂ | ಸಂರಕ್ಷಿತ ಪ್ರದೇಶದ ವಿವರ | ಸಂಖ್ಯೆ |
|---|---|---|
| 1 | ರಾಷ್ಟ್ರೀಯ ಉದ್ಯಾನವನಗಳು | 5 |
| 2 | ವನ್ಯಜೀವಿ ಧಾಮಗಳು | 37 |
| 3 | ಸಂರಕ್ಷಿತ ಮೀಸಲು ಪ್ರದೇಶ | 19 |
| 4 | ಸಮುದಾಯ ಮೀಸಲು ಪ್ರದೇಶ | 1 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಆ) | ರಾಜ್ಯದ ಗಣತಿಯಂತೆ ಆನೆ ಮತ್ತು ಹುಲಿಗಳ ಸಂಖ್ಯೆ ಎಷ್ಟು; ಎಲ್ಲೆಲ್ಲಿ ಎಷ್ಟು ಪ್ರಾಣಿಗಳು ಇವೆ; (ಸಂಪೂರ್ಣ ವಿವರ ನೀಡುವುದು) | ರಾಜ್ಯದ ಗಣತಿಯಂತೆ ಒಟ್ಟು **6395 ಆನೆಗಳು** ಮತ್ತು **563 ಹುಲಿಗಳಿದ್ದು** ವಿವರ ಈ ಕೆಳಕಂಡಂತಿದೆ. |

**ಹುಲಿಗಳ ವಿವರ:**

| ಕ್ರ. ಸಂ. | ವಿಭಾಗ | ಕ್ಯಾಮೆರಾ ಟ್ರ್ಯಾಪ್‌ನಲ್ಲಿ ಸೆರೆಸಿಕ್ಕ ಹುಲಿಗಳ ಸಂಖ್ಯೆ |
|---|---|---|
| 1 | ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶ | 140 |
| 2 | ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶ | 150 |
| 3 | ಬಿ.ಆರ್.ಟಿ ಹುಲಿ ಸಂರಕ್ಷಿತ ಪ್ರದೇಶ | 37 |
| 4 | ಭದ್ರಾ ಹುಲಿ ಸಂರಕ್ಷಿತ ಪ್ರದೇಶ | 28 |
| 5 | ಕಾಳಿ ಹುಲಿ ಸಂರಕ್ಷಿತ ಪ್ರದೇಶ | 17 |
| 6 | ಇತರೆ ವನ್ಯಜೀವಿ/ ಪ್ರಾದೇಶಿಕ ವಿಭಾಗಗಳು | 191 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| | | ಆನೆಗಳ ವಿವರ: |

| ಕ್ರ. ಸಂ | ವಿಭಾಗ | ಸಂಖ್ಯೆ |
|---|---|---|
| 1 | ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶ | 1116 |
| 2 | ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶ | 831 |
| 3 | ಬಿ.ಆರ್.ಟಿ ಹುಲಿ ಸಂರಕ್ಷಿತ ಪ್ರದೇಶ | 619 |
| 4 | ಮಲೆ ಮಹದೇಶ್ವರ ವನ್ಯಜೀವಿ ವಿಭಾಗ | 706 |
| 5 | ಭದ್ರ ಹುಲಿ ಸಂರಕ್ಷಿತ ಪ್ರದೇಶ | 445 |
| 6 | ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನ | 127 |
| 7 | ಶಿವಮೊಗ್ಗ ವನ್ಯಜೀವಿ ವಿಭಾಗ | 127 |
| 8 | ಮಡಿಕೇರಿ ವನ್ಯಜೀವಿ ವಿಭಾಗ | 113 |
| 9 | ಕಾವೇರಿ ವನ್ಯಜೀವಿ ವಿಭಾಗ | 236 |
| 10 | ಮಡಿಕೇರಿ ಪ್ರಾದೇಶಿಕ ವಿಭಾಗ | 214 |
| 11 | ಹಾಸನ ವಿಭಾಗ | 66 |
| 12 | ವಿರಾಜಪೇಟೆ ವಿಭಾಗ | 58 |
| 13 | ರಾಮನಗರ ವಿಭಾಗ | 33 |
| 14 | ಮೈಸೂರು ಪ್ರಾದೇಶಿಕ ವಿಭಾಗ | 59 |
| 15 | ಕೊಪ್ಪ ವಿಭಾಗ | 128 |
| 16 | ಕಾಳಿ ಹುಲಿ ಸಂರಕ್ಷಿತ ಪ್ರದೇಶ | 38 |
| 17 | ಮಂಗಳೂರು ವಿಭಾಗ | 47 |
| 18 | ಚಿಕ್ಕಮಗಳೂರು ವಿಭಾಗ | 33 |
| 19 | ಕುದುರೆಮುಖ ವಿಭಾಗ | 5 |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td></td><td></td><td>
<table>
<tr><td>20</td><td>ಕೋಲಾರ ವಿಭಾಗ</td><td>13</td></tr>
<tr><td>21</td><td>ಹಳಿಯಾಳ ವಿಭಾಗ</td><td>3</td></tr>
<tr><td>22</td><td>ಯಲ್ಲಾಪುರ ವಿಭಾಗ</td><td>2</td></tr>
<tr><td>23</td><td>ಭದ್ರಾವತಿ ವಿಭಾಗ</td><td>8</td></tr>
</table>
</td></tr>
<tr><td>ಇ)</td><td>ಇತ್ತೀಚಿನ ದಿನಗಳಲ್ಲಿ ಕಾಡುಪ್ರಾಣಿಗಳು ಅರಣ್ಯ ಪ್ರದೇಶದಿಂದ ಬಯಲು ಪ್ರದೇಶಕ್ಕೆ ಪ್ರವೇಶಿಸುತ್ತಿದ್ದು. ಕಾಡಂಚಿನ ಜನರಲ್ಲಿ ಮತ್ತು ಜಾನುವಾರುಗಳಲ್ಲಿ ಭಯದ ವಾತಾವರಣ ಸೃಷ್ಟಿಯಾಗುತ್ತಿರುವುದು ನಿಜವೇ; ಇದನ್ನು ತಡೆಗಟ್ಟಲು ಅರಣ್ಯ ಇಲಾಖೆ ಕೈಗೊಂಡ ಕ್ರಮಗಳೇನು?</td><td>ಹೌದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ವನ್ಯಜೀವಿಗಳು ಅರಣ್ಯ ಪ್ರದೇಶದಿಂದ ಹೊರಬರುವುದನ್ನು ತಡೆಗಟ್ಟಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.
<ul>
<li>ಮಾನವ ಪ್ರಾಣಹಾನಿಗೆ ಕಾರಣವಾದ ಹುಲಿ ಹಾಗೂ ಆನೆಯನ್ನು ನಿರ್ದಿಷ್ಟವಾಗಿ ಗುರುತಿಸಿ ಸೆರೆಹಿಡಿಯಲಾಗಿರುತ್ತದೆ.</li>
<li>ಮಾನವ-ವನ್ಯಜೀವಿ ಸಂಘರ್ಷ ಪ್ರಕರಣಗಳು ಹೆಚ್ಚಾಗಿ ಕಂಡು ಬರುತ್ತಿರುವ ವಲಯಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕಳ್ಳಬೇಟೆ ಶಿಬಿರಗಳ ಸಿಬ್ಬಂದಿಗಳನ್ನು ತಾತ್ಕಾಲಿಕವಾಗಿ ಸಂಘರ್ಷ ಸಂಭವಿಸುತ್ತಿರುವ ಅರಣ್ಯದಂಚಿನ ಗಡಿರೇಖೆಗಳಿಗೆ ಸ್ಥಳಾಂತರಿಸಲು ಅಗತ್ಯ ಕ್ರಮಕೈಗೊಳ್ಳಲಾಗಿರುತ್ತದೆ. ಶಿಬಿರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ನೌಕರರು ಸಂಘರ್ಷವಿರುವ ವಲಯಗಳಲ್ಲಿ ನಿರಂತರವಾಗಿ ಮುಂದಿನ ಮೂರು ತಿಂಗಳವರೆಗೆ ಗಸ್ತು ನಡೆಸಿ, ಮಾನವ ವನ್ಯಪ್ರಾಣಿ ಸಂಘರ್ಷವನ್ನು ತಡೆಗಟ್ಟಲು ಕ್ರಮವಹಿಸಲಾಗಿದೆ.</li>
<li>ಮಾನವ-ವನ್ಯಜೀವಿ ಸಂಘರ್ಷ ಸಮಸ್ಯೆ ಇರುವ ಪ್ರತಿಯೊಂದು ವನ್ಯಜೀವಿ' ವಲಯಗಳಲ್ಲಿ ಮಾನವ-ವನ್ಯಜೀವಿ ಸಂಘರ್ಷ ಉಂಟಾಗುವ ಸಂದರ್ಭದಲ್ಲಿ ತಕ್ಷಣದ ಪ್ರತಿಕ್ರಿಯೆಗಾಗಿ ಕ್ಷಿಪಸ್ಪಂದನ ವಾಹನ ಹಾಗೂ ಡ್ರೋನ್ ಒಳಗೊಂಡಂತೆ ಇತರೆ ಉಪಕರಣಗಳೊಂದಿಗೆ ಒಂದು ಕ್ಷಿಪ್ರಸ್ಪಂದನ ತಂಡವನ್ನು (RRT team) ಪಾಳಿ ಆಧಾರದ ಮೇಲೆ ರಚಿಸಿ, ಸದರಿ ಕ್ಷಿಪ್ರಸ್ಪಂದನ ತಂಡಕ್ಕೆ ಸಿಬ್ಬಂದಿಗಳನ್ನು ಪ್ರಸ್ತುತ ಅಸ್ತಿತ್ವದಲ್ಲಿರುವ ಆನೆ ಕಾರ್ಯಪಡೆ / ಕ್ಷಿಪ್ರ ಸ್ಪಂದನ ತಂಡ / ವಿಶೇಷ ಹುಲಿ ಸಂರಕ್ಷಣಾ ದಳದಿಂದ (STPF) ನಿಯೋಜಿಸಲಾಗಿದೆ.</li>
<li>ಮಾನವ ವನ್ಯಜೀವಿ ಸಂಘರ್ಷವಿರುವ ವನ್ಯಜೀವಿ ವಲಯಗಳ ಸಂಪೂರ್ಣ ಗಡಿರೇಖೆಗಳಲ್ಲಿ ಎಲ್ಲೆಲ್ಲಿ ನೆಟ್ ವರ್ಕ್ ನ ಸಂಪರ್ಕವಿರುವುದು ಅಲ್ಲಿ Real time Surveillance GSM ಆಧಾರಿತ Camera with Garuda Software ನ್ನು ಅಳವಡಿಸಿ, ಸದರಿ ಮಾಹಿತಿಯನ್ನಾಧರಿಸಿ ಮಾನವ ವನ್ಯಜೀವಿ ಸಂಘರ್ಷ ನಿಯಂತ್ರಣದ ನಿರ್ವಹಣೆಯನ್ನು ಮಾಡಲಾಗುತ್ತಿದೆ.</li>
<li>ಜೊತೆಗೆ ಹುಲಿ ಸಂರಕ್ಷಿತ ಪ್ರದೇಶಗಳಲ್ಲಿ ಲಭ್ಯವಿರುವ Camera traps ಗಳನ್ನು ಸಾಕಷ್ಟು ಸಂಖ್ಯೆಯಲ್ಲಿ ಅರಣ್ಯ ಪ್ರದೇಶದ ಅಂಚಿನಲ್ಲಿರುವ Conflict Zone ನಲ್ಲಿ ಅಳವಡಿಸಿ ಪ್ರಾಣಿಗಳ ಚಲನವಲನಗಳನ್ನು ಪರಿಶೀಲಿಸಲಾಗುತ್ತಿದೆ.</li>
</ul>
</td></tr>
</table>

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| | | **ಭೌತಿಕ ಅಡೆತಡೆಗಳ ನಿರ್ಮಾಣ:**<br>• ಕಾಡಾನೆಗಳು ಅರಣ್ಯ ಪ್ರದೇಶದಿಂದ ಹೊರಗೆ ಬಾರದಂತೆ ತಡೆಗಟ್ಟಲು ಅರಣ್ಯದಂಚಿನಲ್ಲಿ ಸೌರಶಕ್ತಿ ಬೇಲಿ ನಿರ್ಮಾಣ/ನಿರ್ವಹಣೆ, ಆನೆತಡೆ ಕಂದಕ ನಿರ್ಮಾಣ/ನಿರ್ವಹಣೆ ಮಾಡಲಾಗಿದ್ದು ಮತ್ತು ರೈಲ್ವೆ ಹಳಿಗಳನ್ನು ಉಪಯೋಗಿಸಿ ಬ್ಯಾರಿಕೇಡ್ ನಿರ್ಮಿಸುವ ಕಾಮಗಾರಿಯನ್ನು ಕೈಗೊಳ್ಳಲಾಗಿದೆ.<br>• ರಾಜ್ಯದಲ್ಲಿ ಮಾನವ-ಆನೆ ಸಂಘರ್ಷ ಹೆಚ್ಚಾಗಿರುವ ಪ್ರದೇಶಗಳಲ್ಲಿ ಕಾಡಾನೆಗಳು ಅರಣ್ಯ ಪ್ರದೇಶದಿಂದ ಹೊರಗೆ ಬಾರದಂತೆ ನಿಯಂತ್ರಿಸಲು ಉಪಯೋಗಿಸಿದ ರೈಲ್ವೆ ಹಳಿಗಳನ್ನು ಉಪಯೋಗಿಸಿಕೊಂಡು ರೈಲ್ವೆ ಬ್ಯಾರಿಕೇಡ್ ಕಾಮಗಾರಿಯನ್ನು ಕೈಗೊಳ್ಳಲಾಗುತ್ತಿದ್ದು, ಒಟ್ಟು 428 ಕಿ.ಮೀ ರೈಲ್ವೆ ಬ್ಯಾರಿಕೇಡ್ ನಿರ್ಮಿಸಲಾಗಿದೆ.<br>**ಆನೆ ಕಾರ್ಯಪಡೆಗಳ ಸ್ಥಾಪನೆ:**<br>• ಸರ್ಕಾರವು ದಿನಾಂಕ:21.11.2022 ರ ಆದೇಶದಲ್ಲಿ ಹಾಸನ, ಚಿಕ್ಕಮಗಳೂರು, ಮೈಸೂರು ಮತ್ತು ಕೊಡಗು ಜಿಲ್ಲೆಗಳಲ್ಲಿ ಹಾಗೂ ದಿನಾಂಕ: 01.02.2023ರ ಆದೇಶದಲ್ಲಿ ಚಾಮರಾಜನಗರ ಜಿಲ್ಲೆ, ದಿನಾಂಕ: 30.06.2023 ರ ಆದೇಶದಲ್ಲಿ ರಾಮನಗರ ಹಾಗೂ ಬೆಂಗಳೂರು ಜಿಲ್ಲೆಗಳಲ್ಲಿ ಮತ್ತು ದಿನಾಂಕ: 18.05.2024 ರ ಆದೇಶದಲ್ಲಿ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಕಾಡಾನೆ ಹಾವಳಿಯನ್ನು ತಡೆಗಟ್ಟಲು ಪ್ರತಿ ಜಿಲ್ಲೆಗೊಂದರಂತೆ ಅಧಿಕಾರಿ / ಸಿಬ್ಬಂದಿಗಳನ್ನೊಳಗೊಂಡ 08 ಆನೆ ಕಾರ್ಯಪಡೆ (Elephant Task Force) ನ್ನು ರಚಿಸಲಾಗಿರುತ್ತದೆ.<br>**ಚಿರತೆ ಕಾರ್ಯಪಡೆಗಳ ಸ್ಥಾಪನೆ:**<br>• ಸರ್ಕಾರವು ದಿನಾಂಕ: 31.01.2023ರ ಆದೇಶದಲ್ಲಿ ಮೈಸೂರು ವೃತ್ತದ ಮೈಸೂರು / ನಂಜನಗೂಡು / ಹೆಚ್.ಡಿ.ಕೋಟೆ / ಸರಗೂರು / ಟಿ.ನರಸೀಪುರ / ಮಂಡ್ಯ / ಪಾಂಡವಪುರ / ನಾಗಮಂಗಲ ವ್ಯಾಪ್ತಿಯಲ್ಲಿ ಚಿರತೆ ಹಾವಳಿ ಹೆಚ್ಚಾಗಿರುವ ಪ್ರದೇಶಗಳಲ್ಲಿ ಚಿರತೆ ಹಾವಳಿ ನಿಭಾಯಿಸುವ ನಿಟ್ಟಿನಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿ, ವನ್ಯಜೀವಿ ವಿಭಾಗ, ಮೈಸೂರು ಇವರ ನೇತೃತ್ವದಲ್ಲಿ ಚಿರತೆ ಕಾರ್ಯಪಡೆ (Leopard Task Force) ರಚಿಸಲಾಗಿದೆ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು) ರವರ ಅಧಿಕೃತ ಜ್ಞಾಪನಾ ಪತ್ರ ದಿನಾಂಕ: 24.11.2023 ರಲ್ಲಿ ಬೆಂಗಳೂರು ಜಿಲ್ಲೆಯ ಕಗ್ಗಲೀಪುರ / ಆನೆಕಲ್ಲು / ಯಲಹಂಕ / ಹೊಸಕೋಟೆ / ಕೆ.ಆರ್.ಪುರಂ ವಲಯಗಳ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಚಿರತೆ ಹಾವಳಿ ನಿಭಾಯಿಸುವ ನಿಟ್ಟಿನಲ್ಲಿ ಚಿರತೆ ಕಾರ್ಯಪಡೆಯನ್ನು ರಚಿಸಲಾಗಿದೆ. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| | | **ಜಲ ಸಂಪನ್ಮೂಲ ಅಭಿವೃದ್ಧಿ:**<br>• ವನ್ಯಪ್ರಾಣಿಗಳಿಗಾಗಿ ಅರಣ್ಯ ಪ್ರದೇಶಗಳ ಒಳಗೆ ನೀರಿನ ಲಭ್ಯತೆ ಹೆಚ್ಚಿಸಲು ರಕ್ಷಿತಾರಣ್ಯಗಳಲ್ಲಿ ಕೆರೆಗಳ ನಿರ್ಮಾಣ ಹಾಗೂ ಪುನಶ್ಚೇತನಗೊಳಿಸಿ ವನ್ಯಪ್ರಾಣಿಗಳ ಆವಾಸ ಸ್ಥಾನವನ್ನು ಅಭಿವೃದ್ಧಿಗೊಳಿಸಲಾಗುತ್ತಿದೆ. ಇದರಿಂದ ಕಾಡಾನೆ ಹಾಗೂ ಇತರೆ ವನ್ಯಪ್ರಾಣಿಗಳು ಕಾಡಿನಿಂದ ಹೊರಗೆ ಬಾರದಂತೆ ತಡೆಯಲಾಗುತ್ತಿದೆ.<br>**ಆವಾಸ ಸ್ಥಾನ ಅಭಿವೃದ್ಧಿ:**<br>• ಅರಣ್ಯ ಪ್ರದೇಶಗಳಲ್ಲಿ ಹುಲ್ಲುಗಾವಲು ಸಂರಕ್ಷಣೆ ಹಾಗೂ ಅಭಿವೃದ್ಧಿಗೊಳಿಸಲು ಹೆಚ್ಚಿನ ಅರಣ್ಯ ಪ್ರದೇಶಗಳಲ್ಲಿ ದಟ್ಟವಾಗಿ ಬೆಳೆದ ಲಂಟಾನ ಮತ್ತು ಯುಪಟೋರಿಯಂ ಕಳೆಗಳಿಂದಾಗಿ ಹುಲ್ಲಿನ ಬೆಳವಣಿಗೆಗೆ ತೀವ್ರ ಅಡಚಣೆಯಾಗಿ ಅರಣ್ಯದಲ್ಲಿ ಹುಲ್ಲಿನ ಲಭ್ಯತೆ ಗಣನೀಯವಾಗಿ ಕಡಿಮೆಯಾಗಿರುವುದರಿಂದ ಹುಲ್ಲು ಬೆಳೆಯುವ ಪ್ರದೇಶಗಳಲ್ಲಿ ಬೆಳೆದಿರುವ ಲಂಟಾನ ಮತ್ತು ಯುಪಟೋರಿಯಂ ಕಳೆಗಳನ್ನು ಕಿತ್ತು ಸ್ವಚ್ಛಗೊಳಿಸಿ ಅರಣ್ಯಕ್ಕೆ ಪೂರಕವಾದ ಹುಲ್ಲು ಬೆಳೆಯಲು ಅನುವು ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.<br>**ತ್ವರಿತ ಕಾರ್ಯಾಚರಣೆ:**<br>• ಆನೆ ಕಾರ್ಯಪಡೆ (ETF) ಮತ್ತು ಚಿರತೆ ಕಾರ್ಯಪಡೆ (LTF) ಗಳಿಗೆ 24X7 ಕಾರ್ಯ ನಿರ್ವಹಿಸಲು ನಿಯಂತ್ರಣ ಕೊಠಡಿಯನ್ನು ಸ್ಥಾಪಿಸಿದ್ದು, ನಿಯಂತ್ರಣ ಕೊಠಡಿಗೆ ಬರುವ ಕರೆಗಳಿಗೆ ಸ್ಪಂದಿಸಿ ಕೂಡಲೇ ಕ್ರಮವಹಿಸಲಾಗುತ್ತಿದೆ.<br>• ಚಿರತೆ / ಹುಲಿ ಹಾವಳಿ ಹೆಚ್ಚಾಗಿರುವ ಸೂಕ್ಷ್ಮ ಪ್ರದೇಶಗಳಲ್ಲಿ ಬೋನುಗಳನ್ನು ಇರಿಸಿ ಸೆರೆ ಹಿಡಿದು, ಸೂಕ್ತ ಆವಾಸಸ್ಥಾನಕ್ಕೆ ಸ್ಥಳಾಂತರಿಸಲು ಕ್ರಮವಹಿಸಲಾಗುತ್ತಿದೆ.<br>• ಕಾಡಾನೆ ಹಾವಳಿ ತುರ್ತು ನಿರ್ವಹಣೆಗಾಗಿ ಕ್ಷಿಪ್ರ ಕಾರ್ಯಪಡೆ ತಂಡಗಳನ್ನು (RRT) ರಚಿಸಿ ನಿರ್ವಹಿಸಲಾಗುತ್ತಿದೆ.<br>• ಕಾಡಾನೆ ಹಿಮ್ಮೆಟ್ಟಿಸುವ ತಂಡಗಳನ್ನು ರಚಿಸಿ ಕಾಡಾನೆಗಳನ್ನು ಕಾಡಿಗೆ ಹಿಮ್ಮೆಟ್ಟಿಸುವ ಕಾರ್ಯ ಕೈಗೊಳ್ಳಲಾಗುತ್ತಿದೆ.<br>• ನಿಸ್ತಂತು ಜಾಲದ ಮೂಲಕ ಮಾಹಿತಿ ಸಂವಹನ ಮಾಡಲಾಗುತ್ತಿದೆ.<br>• ಕಾಡಾನೆಗಳ ಮಾಹಿತಿಯನ್ನು ಸಂಗ್ರಹಿಸಲು 24 ಗಂಟೆ ಕಾರ್ಯನಿರ್ವಹಿಸುವ ಮಾಹಿತಿ ಕೇಂದ್ರ ಸ್ಥಾಪಿಸಲಾಗಿದೆ.<br>• ಕಾಡಾನೆ ಗುಂಪಿನಲ್ಲಿದ್ದ ವಯಸ್ಕ ಹೆಣ್ಣಾನೆಯನ್ನು ಗುರುತಿಸಿ ಅದಕ್ಕೆ ರೇಡಿಯೋ ಕಾಲರ್ ಅಳವಡಿಸಿ ಆನೆಗಳ ಚಲನ-ವಲನಗಳ ಬಗ್ಗೆ ಎಸ್.ಎಂ.ಎಸ್. ಹಾಗೂ ವಾಟ್ಸಾಪ್ ಮೂಲಕ ಜನರಿಗೆ ಮಾಹಿತಿಯನ್ನು ನೀಡಿ ಮಾನವ ಪ್ರಾಣಹಾನಿ ಹಾಗೂ ಮಾನವ ಗಾಯ ತಪ್ಪಿಸಲು ಕ್ರಮ ವಹಿಸಲಾಗುತ್ತಿದೆ. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| | | • ಸಾರ್ವಜನಿಕರಿಗೆ ಉಪಟಳ ನೀಡುತ್ತಿರುವ ಪುಂಡಾನೆಗಳನ್ನು ಗುರುತಿಸಿ, ಸೆರೆಹಿಡಿದು ಆಗ್ಗಿಂದಾಗ್ಗೆ ಆನೆ ಶಿಬಿರಗಳಿಗೆ ಸ್ಥಳಾಂತರಿಸಲಾಗಿದೆ.<br>• ವನ್ಯಪ್ರಾಣಿಗಳ ಹಾವಳಿ ಹೆಚ್ಚಾಗಿರುವ ಪ್ರದೇಶಗಳಲ್ಲಿ ಈಗಾಗಲೇ ರಚಿಸಿರುವ RRT, ADC, ಮತ್ತು ETF ಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ತಂಡಗಳನ್ನು ಒಟ್ಟುಗೂಡಿಸಿ ಮಾನವ-ವನ್ಯಜೀವಿ ಸಂಘರ್ಷ ಉಪ ತಂಡಗಳಾಗಿ ರಚಿಸಿ ಆಯ್ದ ಸ್ಥಳಗಳಲ್ಲಿ ನಿಯೋಜಿಸಲಾಗಿದೆ.<br>• ಸರ್ಕಾರದ ಆದೇಶ ಸಂಖ್ಯೆ: ಅಪಜೀ 96 ಎಫ್.ಡಬ್ಲ್ಯೂ.ಎಲ್. 2016 ದಿನಾಂಕ: 01.10.2016 ರಲ್ಲಿ ಮಾನವ ಪ್ರಾಣಕ್ಕೆ ಅಥವಾ ಸ್ವತ್ತಿಗೆ ಅಪಾಯಕಾರಿಯಾಗಿರುವ ಹಾಗೂ ಬೆಳೆನಾಶ ಮಾಡುವ ಕಾಡು ಹಂದಿಗಳನ್ನು ಷರತ್ತುಬದ್ಧವಾಗಿ ಕೊಲ್ಲಲು ಅನುಮತಿ ನೀಡುವ ಬಗ್ಗೆ ಆದೇಶಿಸಲಾಗಿದೆ.<br>**ಅರಿವು ಮೂಡಿಸಲು:**<br>• ಕಾಡಾನೆಗಳ ಹಾವಳಿ ಹೆಚ್ಚಾಗಿರುವ ಪ್ರದೇಶದಲ್ಲಿ ಜನ ಸಂಪರ್ಕ ಸಭೆಯನ್ನು ಕರೆದು ಜನರಲ್ಲಿ ಅರಿವು ಮೂಡಿಸಲಾಗುತ್ತಿದೆ.<br>• ಶಾಲಾಮಕ್ಕಳಿಗೆ ಅರಿವು ಮೂಡಿಸಲು "ಚಿಣ್ಣರ ವನದರ್ಶನ" ಕಾರ್ಯಕ್ರಮ ಕೈಗೊಳ್ಳಲಾಗುತ್ತಿದೆ.<br>**ತಂತ್ರಜ್ಞಾನ ಬಳಕೆ:**<br>• ವಿವಿಧ ವಿಭಾಗಗಳಿಂದ ಲಭ್ಯವಾಗುವ ಮಾಹಿತಿಯನ್ನು ರಿಯಲ್-ಟೈಮ್‌ನಲ್ಲಿ ಸಂಗ್ರಹಿಸಿ, ವಿಶ್ಲೇಷಿಸಿ, ಸೂಕ್ತ ನಿರ್ಧಾರಗಳನ್ನು ಕೈಗೊಳ್ಳಲು ಹಾಗೂ ಕ್ಷೇತ್ರ ಮಟ್ಟದ ಚಟುವಟಿಕೆಗಳನ್ನು ಸಮನ್ವಯಗೊಳಿಸಿ, ತುರ್ತು ಘಟನೆಗಳಿಗೆ ತಕ್ಷಣ ಪ್ರತಿಕ್ರಿಯಿಸಲು ಕೇಂದ್ರಸ್ಥಾನದಲ್ಲಿ **ಸಂಯೋಜಿತ ಕಮಾಂಡ್ ಅಂಡ್ ಕಂಟ್ರೋಲ್ ಸೆಂಟರ್ (ICCC)** ಹಾಗೂ 11 ವಿಭಾಗಗಳಲ್ಲಿ **ವಿಭಾಗೀಯ ಕಮಾಂಡ್ ಅಂಡ್ ಕಂಟ್ರೋಲ್ ಸೆಂಟರ್ (DCCC)** ಸ್ಥಾಪಿಸಲಾಗುತ್ತಿದೆ.<br>• ರೇಡಿಯೋ ಕಾಲರ್ ಅಳವಡಿಸಿರುವ ಕಾಡಾನೆ, ಹುಲಿ, ಚಿರತೆಗಳ ಚಲನ-ವಲನಗಳನ್ನು ದಿನನಿತ್ಯ ಗಮನಿಸಲು ಇಲಾಖಾವತಿಯಿಂದ "ಹೆಜ್ಜೆ" ಎಂಬ ಡ್ಯಾಶ್ ಬೋರ್ಡ್ ನ್ನು ತಯಾರಿಸಲಾಗಿದೆ.<br>• ಕಾಡಂಚಿನ ಗ್ರಾಮಗಳಲ್ಲಿ ವನ್ಯಪ್ರಾಣಿಗಳು ಬಂದಂತಹ ಸಂದರ್ಭಗಳಲ್ಲಿ ಸಾರ್ವಜನಿಕರಿಗೆ ಎಚ್ಚರಿಕೆ/ ಮಾಹಿತಿ ನೀಡಲು Advance alert system ಅನ್ನು ತಯಾರಿಸಲಾಗಿದೆ. ಇದರಿಂದಾಗಿ ಸಾರ್ವಜನಿಕರಿಗೆ ನೇರವಾಗಿ ಸಂದೇಶಗಳನ್ನು ಕಳುಹಿಸಲಾಗುತ್ತಿದೆ.<br>• ಕಾಡಾನೆ ಇರುವ ಪ್ರದೇಶಗಳಲ್ಲಿ ಸಾರ್ವಜನಿಕರಿಗೆ ಎಚ್ಚರಿಕೆ/ ಮಾಹಿತಿ ನೀಡಲು ಡಿಜಿಟಲ್ ಬೋರ್ಡ್‌ಗಳನ್ನು ಅಳವಡಿಸಲಾಗಿದೆ. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| | | • ಅರಣ್ಯದಂಚಿನ ಆಯ್ದ ಪ್ರದೇಶಗಳಲ್ಲಿ "AI" Based Camera ಗಳನ್ನು ಅಳವಡಿಸಲಾಗಿದ್ದು, ವನ್ಯಪ್ರಾಣಿಗಳ ಚಲನ-ವಲನಗಳನ್ನು ಗಮನಿಸಲಾಗುತ್ತಿದೆ.<br>• ಡ್ರೋನ್‌ಗಳ ಮುಖಾಂತರ ವನ್ಯಪ್ರಾಣಿಗಳ ಚಲನ-ವಲನಗಳನ್ನು ಗಮನಿಸಲಾಗುತ್ತಿದೆ.<br>• **ಇ-ಪರಿಹಾರ:** ಈ ಆನ್‌ಲೈನ್ ಅಪ್ಲಿಕೇಶನ್ ಬೆಳೆ, ಆಸ್ತಿ ಮತ್ತು ಜೀವಹಾನಿಗಳಿಗೆ ಪರಿಹಾರದ ಪ್ರಕರಣಗಳನ್ನು ಪ್ರಕ್ರಿಯೆಗೊಳಿಸುತ್ತದೆ, ಪರಿಹಾರ ಪ್ರಕ್ರಿಯೆಯನ್ನು ಸುಗಮಗೊಳಿಸುತ್ತದೆ ಮತ್ತು ಆಡಳಿತ ವಿಳಂಬವನ್ನು ಕಡಿಮೆ ಮಾಡುತ್ತದೆ. ಅಪ್ಲಿಕೇಶನ್ ನಲ್ಲಿ ದಾಖಲಿಸಲಾದ Backend Data ದಿಂದ ಸಂಘರ್ಷದ ಕಾರಣಗಳು, ಹೆಚ್ಚಿನ ಸಂಘರ್ಷದ ಪ್ರದೇಶಗಳು ಮತ್ತು ಸಂಘರ್ಷ-ಉಂಟುಮಾಡುವ ಪ್ರಾಣಿಗಳನ್ನು ವಿಶ್ಲೇಷಿಸಲು ಸಹಾಯ ಮಾಡುತ್ತದೆ.3<br>• ಮಾನವ- ವನ್ಯಜೀವಿ ಸಂಘರ್ಷ ತಡೆಗಟ್ಟಲು 05 ವರ್ಷಗಳ ಸ್ಟ್ರಾಟೆಜಿಕ್ ಪ್ಲಾನ್ ತಯಾರಿಸುವ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ. |

**ಸಂಖ್ಯೆ: ಅಪಜೀ 337 ಎಫ್ ಡಬ್ಲ್ಯೂ ಎಲ್ 2025**

(ಸಹಿ)

**(ಈಶ್ವರ ಬಿ. ಖಂಡ್ರೆ)**
ಅರಣ್ಯ, ಜೀವಿಶಾಸ್ತ್ರ, ಮತ್ತು ಪರಿಸರ ಸಚಿವರು